**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್**

**CC No.935/2021**

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಡಾಃನಾಗರಾಜ ಕುರಿ | ಪಿಡಬ್ಲ್ಯೂ | 12 |
| ತಂದೆ ಹೆಸರು | : | ಸಂಗಪ್ಪ | ಸಿ ಡಬ್ಲ್ಯೂ | 10 |
| ವಯಸ್ಸು | : | 54 ವರ್ಷ | | |
| ಉದ್ಯೋಗ | : | ವೈದ್ಯಾಧಿಕಾರಿಗಳು, ಸಮುದಾಯ ಆರೋಗ್ಯ ಕೇಂದ್ರ, ಗುಳೆದಗುಡ್ಡ | | |
| ವಾಸ ಸ್ಥಳ | : | ಬಾಗಲಕೋಟೆ | | |

**ದಿನಾಂಕ: 19.06.2026 ರಂದು ಸಾಕ್ಷಿದಾರರು ವಿ ಸಿ ಮೂಲಕ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

2003 ರಿಂದ 2017 ರವರೆಗೆ ಹಾನಗಲ್ ತಾಲೂಕ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 05.07.2015 ರಂದು ಚಾಸಾ-1 ರವರು ಹಲ್ಲೆಯ ಹಿನ್ನೆಲೆಯಲ್ಲಿ ಹಾಜರಾಗಿ ಚಿಕಿತ್ಸೆಗಾಗಿ ಬೆಳಿಗ್ಗೆ 11.50 ರ ಸಮಯದಲ್ಲಿ ಹಾನಗಲ್ ಸರಕಾರಿ ಆಸ್ಪತ್ರೆಗೆ ಬಂದಿದ್ದು ಅವರನ್ನು ಪರೀಕ್ಷಿಸಿ ಚಿಕಿತ್ಸೆಯನ್ನು ನೀಡಿರುತ್ತೇನೆ.

ಸದರಿಯವರನ್ನು ಪರೀಕ್ಷಿಸಿದಾಗ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ತಳ ತುಟಿಯ 1 ½ X1 Cm ಹರಿದ ಗಾಯ
2. ಬಲ ಕಿವಿಯ ಮೇಲೆ 2cmX1cm ಉದಿದ ಗಾಯ

ಸದರಿ ಗಾಯಗಳು ಸಾದಾ ಸ್ವರೂಪದ ಗಾಯಗಳಾಗಿದ್ದು ನಾನು ಆ ಬಗ್ಗೆ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಸದರಿ ಗಾಯದ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-6 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು.

3. ದಿನಾಂಕ 05.07.2015 ರಂದು ಚಾಸಾ–4 ರವರು ಹಲ್ಲೆಯ ಹಿನ್ನೆಲೆಯಲ್ಲಿ ಹಾಜರಾಗಿ ಚಿಕಿತ್ಸೆಗಾಗಿ ಮದಾಹ್ನ 12.20 ರ ಸಮಯದಲ್ಲಿ ಹಾನಗಲ್ ಸರಕಾರಿ ಆಸ್ಪತ್ರೆಗೆ ಬಂದಿದ್ದು ಅವರನ್ನು ಪರೀಕ್ಷಿಸಿ ಚಿಕಿತ್ಸೆಯನ್ನು ನೀಡಿರುತ್ತೇನೆ.

ಸದರಿಯವರನ್ನು ಪರೀಕ್ಷಿಸಿದಾಗ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ಬಲ ಗೆನ್ನೆಯ ಮೇಲೆ ಉತದ ಗಾಯ 2cm X1 Cm

ಸದರಿ ಗಾಯ ಸಾದಾ ಸ್ವರೂಪದ ಗಾಯವಾಗಿದ್ದು ನಾನು ಆ ಬಗ್ಗೆ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಸದರಿ ಗಾಯದ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ–7 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ–7(ಬಿ) ಎಂದು ಗುರುತಿಸಲಾಯಿತು.

4. ದಿನಾಂಕ 05.07.2015 ರಂದು ಚಾಸಾ–5 ರವರು ಹಲ್ಲೆಯ ಹಿನ್ನೆಲೆಯಲ್ಲಿ ಹಾಜರಾಗಿ ಚಿಕಿತ್ಸೆಗಾಗಿ ಮದ್ಯಾಹ್ನ 12.30 ರ ಸಮಯದಲ್ಲಿ ಹಾನಗಲ್ ಸರಕಾರಿ ಆಸ್ಪತ್ರೆಗೆ ಬಂದಿದ್ದು ಅವರನ್ನು ಪರೀಕ್ಷಿಸಿ ಚಿಕಿತ್ಸೆಯನ್ನು ನೀಡಿರುತ್ತೇನೆ.

ಸದರಿಯವರನ್ನು ಪರೀಕ್ಷಿಸಿದಾಗ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತವೆ.

1. ಬಲ ಹಣೆಯ ಮೇಲೆ ಉತದ ಗಾಯ 2cm X2 Cm

ಸದರಿ ಗಾಯ ಸಾದಾ ಸ್ವರೂಪದ ಗಾಯವಾಗಿದ್ದು ನಾನು ಆ ಬಗ್ಗೆ ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಸದರಿ ಗಾಯದ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ–8 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ–8(ಬಿ) ಎಂದು ಗುರುತಿಸಲಾಯಿತು.

ಸದರಿ ಈ ಮೇಲೆ ಹೇಳಿದ ಗಾಯಗಳು ಗಟ್ಟಿಯಾದ ಮತ್ತು ಬಲವಾದ ವಸ್ತುವಿನಿಂದ ಹಲ್ಲೆ ಮಾಡಿದರೆ ಆಗುವ ಸಾಧ್ಯತೆ ಇವೆ.

**:ಪಾಟೀ ಸವಾಲು: ಆರೋಪಿತರ ಪರ ಶ್ರೀಮತಿ. ವಿ ಬಿ ಬಿ ವಕೀಲರಿಂದ:**

ಸದರಿ ಚಾಸಾ-1 ರವರಿಗೆ ಕೆಳ ತುಟಿಗೆ ಹರಿದ ಗಾಯವಾದುದ್ದಕ್ಕೆ ಬ್ಯಾಂಡೇಜ್ ಹಾಕಿದ್ದೆನೋ ಇಲ್ಲವೋ ಎಂದು ನನಗೆ ಗೊತ್ತಿಲ್ಲ. ಚಾಸಾ-1, 4 ಮತ್ತು 5 ರವರು ಹಲ್ಲೆಯ ಹಿನ್ನಲೆಯಲ್ಲಿ ಚಿಕಿತ್ಸೆಗಾಗಿ ಬಂದಿದ್ದಕ್ಕೆ ಸಂಬಂಧಿಸಿದಂತೆ ಪೋಲಿಸರಿಗೆ ಮಾಹಿತಿ ನೀಡಿದ್ದು ಸದರಿ ಮಾಹಿತಿ ನೀಡಿದ ಬಗೆಗಿನ ವಿವರನ್ನು ನನಗೆ ಈಗ ಹೇಳಲು ಬರುವುದಿಲ್ಲ. ಸದರಿಯವರಿಗೆ ಒಳರೋಗಿಯಾಗಿ ಚಿಕಿತ್ಸೆಯನ್ನು ನೀಡಿಲ್ಲ. ಸದರಿ ಚಾಸಾ-1, 4 ಮತ್ತು 5 ರವರಿಗೆ ಆದ

ಗಾಯಗಳು ಹೊರನೋಟದಿಂದ ಕಾಣುವ ಗಾಯಗಳು ಆಗಿದ್ದವು. ಸದರಿ ಗಾಯಗಳು ಸಾಮಾನ್ಯವಾಗಿ ಓರ್ವ ವ್ಯಕ್ತಿ ಆಯ ತಪ್ಪಿ ಬಿದ್ದರೆ ಆಗುವ ಸಾಧ್ಯತೆಗಳು ಇವೆ ಎಂದರೆ ಸರಿ. . ಚಾಸಾ-1, 47 ಮತ್ತು 5 ರವರಿಗೆ ನಿಪಿ-6 ರಿಂದ 8 ರಲ್ಲಿ ನಮೂದಿಸಿರುವ ಗಾಯಗಳು ಆಗದೇ ಇದ್ದರೂ ಸಹ ಅವರಿಗೆ ಸಹಾಯ ಆಗಲೆಂದು ಸುಳ್ಳು ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

: ಮರುವಿಚಾರಣೆ : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-
1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ ಹಾನಗಲ್